**All India Radio: Bangalore**
**Regional Bulletin In Kannada**
**11.10.2025 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**11.10.2025 / 2.30 p.m.**

**<><><><>**

ಮುಖ್ಯಾಂಶಗಳು

1. ದಾವಣಗೆರೆ, ಚಿತ್ರದುರ್ಗ, ಗದಗ ಸೇರಿದಂತೆ ದೇಶದ ೧೦೦ ಜಿಲ್ಲೆಗಳಲ್ಲಿ ಪಿಎಂ ಧನಧಾನ್ಯ ಯೋಜನೆಗೆ ಪ್ರಧಾನಿ ಚಾಲನೆ
2. ಬೆಂಗಳೂರಿನ ಲಾಲ್‌ಬಾಗ್ ಅಭಿವೃದ್ಧಿಗೆ ೧೦ ಕೋಟಿ ರೂಪಾಯಿ ಘೋಷಿಸಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್
3. ಗುರುಮಠಕಲ್‌ನಲ್ಲಿ ೧ ಕೋಟಿ ೨೧ ಲಕ್ಷ ಮೌಲ್ಯದ ಪಡಿತರ ಅಕ್ಕಿ ಅಕ್ರಮ ದಾಸ್ತಾನು - ಸಿಐಡಿ ಅಧಿಕಾರಿಗಳಿಂದ ತನಿಖೆ
4. ಐದು ಸಾವಿರ ಸಂಚಿಕೆ ಪೂರೈಸಿದ ಚಂದನ ವಾಹಿನಿಯ 'ಥಟ್ ಅಂತ ಹೇಳಿ' ಕಾರ್ಯಕ್ರಮ ; ಡಾ. ನಾ ಸೋಮೇಶ್ವರ್‌ರನ್ನು ಶ್ಲಾಘಿಸಿದ ಸಚಿವ ಈಶ್ವರ ಖಂಡ್ರೆ
5. ಬೆಂಗಳೂರು ಸೇರಿದಂತೆ ರಾಜ್ಯದ ಹಲವೆಡೆ ಇಂದು ಧಾರಾಕಾರ ಮಳೆ ; ಹವಾಮಾನ ಇಲಾಖೆ ಮುನ್ಸೂಚನೆ

<><><><>

ನವದೆಹಲಿಯಲ್ಲಿಂದು ಪ್ರಧಾನಮಂತ್ರಿ ನರೇಂದ್ರ ಮೋದಿ, ೨೪ ಸಾವಿರ ಕೋಟಿ ರೂಪಾಯಿ ಅನುದಾನದೊಂದಿಗೆ ಪಿಎಂ-ಧನಧಾನ್ಯ ಯೋಜನೆ ಮತ್ತು ೧೧ ಸಾವಿರ ಕೋಟಿ ರೂಪಾಯಿಗೂ ಅಧಿಕ ಅನುದಾನದೊಂದಿಗೆ ಬೇಳೆ ಕಾಳು ಉತ್ಪಾದನೆಯಲ್ಲಿ ಸ್ವಾವಲಂಬನೆ ಯೋಜನೆಗಳಿಗೆ ಚಾಲನೆ ನೀಡಿದರು. ಕಡಿಮೆ ಉತ್ಪಾದಕತೆ ಹೊಂದಿರುವ ದಾವಣಗೆರೆ, ಚಿತ್ರದುರ್ಗ, ಗದಗ ಸೇರಿದಂತೆ ದೇಶದ ೧೦೦ ಜಿಲ್ಲೆಗಳಲ್ಲಿ

ದ್ವಿದಳ ಧಾನ್ಯ, ಎಣ್ಣೆಕಾಳುಗಳಿಗೆ ಪ್ರೋತ್ಸಾಹ ನೀಡಲು ದೇಶದ ಎಲ್ಲ ರಾಜ್ಯಗಳ ಕೃಷಿ ವಿಜ್ಞಾನ ಕೇಂದ್ರಗಳ ಮೂಲಕ ರೈತರಿಗೆ  ತರಬೇತಿಯನ್ನು ಆರಂಭಿಸಲಾಗಿದೆ ಎಂದು ದಾವಣಗೆರೆ ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಡಾ.ಟಿ.ಎನ್.ದೇವರಾಜ್ ತಿಳಿಸಿದ್ದಾರೆ.

**ಧ್ವನಿ : ಡಾ.ಟಿ.ಎನ್. ದೇವರಾಜ್**

ದಾವಣಗೆರೆಯ ಕೃಷಿ ವಿಜ್ಞಾನ ಕೇಂದ್ರದಲ್ಲಿ ಆಯೋಜಿಸಿದ್ದ  ನೇರ ಪ್ರಸಾರದ ಈ ಕಾರ್ಯಕ್ರಮವನ್ನು ನೂರಾರು ರೈತರು ಮತ್ತು ವಿದ್ಯಾರ್ಥಿಗಳು ವೀಕ್ಷಿಸಿದರು.

<><><><>

ಮುಖ್ಯಮಂತ್ರಿ ಆಗುವ ಕಾಲ ಹತ್ತಿರ ಬಂದಿದೆ ಎಂದು ಹೇಳಿಲ್ಲ ಎಂದು ಉಪಮುಖ್ಯ ಮಂತ್ರಿ ಡಿ.ಕೆ ಶಿವಕುಮಾರ್ ಬೆಂಗಳೂರಿನಲ್ಲಿ ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನ ಲಾಲ್‌ಬಾಗ್‌ನಲ್ಲಿಂದು ಬೆಂಗಳೂರು ನಡಿಗೆ ಕಾರ್ಯಕ್ರಮದ ಅಂಗವಾಗಿ ಸಾರ್ವಜನಿಕರೊಂದಿಗೆ ಸಂವಾದ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಮ್ಮ ಹೇಳಿಕೆಯನ್ನು ತಪ್ಪಾಗಿ ಅರ್ಥೈಸಲಾಗಿದೆ ಎಂದು ಹೇಳಿದ್ದಾರೆ. ಸುಳ್ಳು ಸುದ್ದಿ ಮೂಲಕ ದಾರಿ ತಪ್ಪಿಸುವ ಪ್ರಯತ್ನ ಮಾಡಿದರೆ ಮಾನನಷ್ಟ ಮೊಕದ್ದಮ್ಮೆ ಹಾಕಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ಇದೇ ವೇಳೆ ಲಾಲ್‌ಬಾಗ್ ಅಭಿವೃದ್ಧಿಗೆ ಸಾರ್ವಜನಿಕರು ಬಯಸಿದಂತೆ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವತಿಯಿಂದ ೧೦ ಕೋಟಿ ರೂಪಾಯಿ ಅನುದಾನ ನೀಡಲಾಗುವುದು ಎಂದು ತಿಳಿಸಿದ್ದಾರೆ.

<><><><>

ಯಾದಗಿರಿ ಜಿಲ್ಲೆಯ ಗುರುಮಠಕಲ್‌ನಲ್ಲಿ ೧ ಕೋಟಿ ೨೧ ಲಕ್ಷ ಮೌಲ್ಯದ ಪಡಿತರ ಅಕ್ಕಿ ಅಕ್ರಮ ದಾಸ್ತಾನು ಆರೋಪ ಪ್ರಕರಣದ ತನಿಖೆಯನ್ನು ಸಿಐಡಿ ಅಧಿಕಾರಿಗಳು ಚುರುಕುಗೊಳಿಸಿದ್ದಾರೆ. ಇಂದು ಗುರುಮಠಕಲ್ ನಲ್ಲಿರುವ ಎರಡು ರೈಸ್ ಮಿಲ್‌ಗಳಿಗೆ ತೆರಳಿ ಸ್ಥಳ ಮಹಜರು ನಡೆಸಿದ್ದಾರೆ. ಈ ವೇಳೆ ತೆಲಂಗಾಣ, ಪಂಜಾಬ್, ಹರಿಯಾಣ,

ಗುಜರಾತ್ ರಾಜ್ಯಗಳ ಹೆಸರಿರುವ ಅಕ್ಕಿ ಮೂಟೆಗಳು ಮಿಲ್‌ಗಳಲ್ಲಿ ಪತ್ತೆಯಾಗಿವೆ. ಸಿಐಡಿ ಎಡಿಜಿಪಿ ಬಿ.ಕೆ.ಸಿಂಗ್ ಮಾರ್ಗದರ್ಶನದಲ್ಲಿ ತನಿಖೆ ನಡೆಯುತ್ತಿದ್ದು, ಪ್ರಕರಣಕ್ಕೆ ಸಂಬಂಧಿಸಿದ ಪೂರಕ ಮಾಹಿತಿಯನ್ನು ಹಂಚಿಕೊಳ್ಳುವಂತೆ ಸಂಬಂಧಿಸಿದ ಇಲಾಖೆಗಳಿಗೆ ತಿಳಿಸಲಾಗಿದೆ ಎಂದು ಮೂಲಗಳು ತಿಳಿಸಿವೆ. ಗುರುಮಠಕಲ್ ತಹಶೀಲ್ದಾರ್‌ರವರು ಕರೆಸಿಕೊಂಡ ಅಧಿಕಾರಿಗಳು ಶ್ರೀಲಕ್ಷ್ಮಿ ವೆಂಕಟೇಶ್ವರ ರೈಸ್ ಮಿಲ್ ಹಾಗೂ ಶ್ರೀಲಕ್ಷ್ಮಿ ಬಾಲಾಜಿ ರೈಸ್ ಮಿಲ್‌ಗಳನ್ನು ಪರಿಶೀಲಿಸಿದ್ದಾರೆ. ಭಾರತೀಯ ಆಹಾರ ನಿಗಮದ ಅಧಿಕಾರಿಗಳನ್ನು ಕರೆತಂದು, ಮಿಲ್ ಗಳಲ್ಲಿನ ಎಲ್ಲಾ ಚೀಲಗಳಿಂದ ಅಕ್ಕಿಯ ಮಾದರಿಗಳನ್ನು ಸಂಗ್ರಹಿಸಲಾಗಿದೆ.

<><><><>

ಜ್ಞಾನ ಮತ್ತು ಜ್ಞಾಪಕಶಕ್ತಿಯ ಸಮ್ಮಿಲನವೇ ರಸಪ್ರಶ್ನೆ ಸ್ಪರ್ಧೆ. ಇದು ಬುದ್ಧಿ, ಭಾವಕ್ಕೆ ಕಸರತ್ತು ನೀಡುತ್ತದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ. ಬೆಂಗಳೂರಿನ ಜಿಕೆವಿಕೆಯ ಸಭಾಂಗಣದಲ್ಲಿಂದು ಬೆಂಗಳೂರು ದೂರದರ್ಶನ ಕೇಂದ್ರದಿಂದ ಪ್ರಸಾರವಾಗುವ ಥಟ್ ಅಂತ ಹೇಳಿ ಕ್ವಿಜ್ ಕಾರ್ಯಕ್ರಮ ೫ ಸಾವಿರ ಸಂಚಿಕೆಯೊಂದಿಗೆ ಗಿನ್ನಿಸ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್ ಸೇರುತ್ತಿರುವ ಸಂದರ್ಭಕ್ಕೆ ಸಾಕ್ಷಿಯಾಗಿ ಮಾತನಾಡಿದ ಅವರು, ಮಾಹಿತಿ ಮತ್ತು ಮನರಂಜನೆ ನೀಡುವ ಈ ಕಾರ್ಯಕ್ರಮ ಕಳೆದ ೨೨ ವರ್ಷಗಳಿಂದ ವೀಕ್ಷಕರ ಜ್ಞಾನದಾಹ ತಣಿಸುತ್ತಿದೆ ಎಂದು ಹೇಳಿದ್ದಾರೆ. ಬೆಂಗಳೂರು ದೂರದರ್ಶನ ಆರಂಭವಾದ ೧೯೮೦ರ ದಶಕದಿಂದಲೂ ತನ್ನ ಗಾಂಭೀರ್ಯತೆ, ವೃತ್ತಿ ನಿಷ್ಠೆ ಉಳಿಸಿಕೊಂಡಿದೆ. ವಿಚಾರಪೂರ್ಣ ಮಾಹಿತಿ, ಆರೋಗ್ಯಕರ ಮನರಂಜನೆಯನ್ನು ಉಚಿತವಾಗಿ ಸಮಸ್ತ ಜನತೆಗೆ ನೀಡುತ್ತಿದೆ. ಹಲವು ಪ್ರತಿಭೆಗಳ ಪ್ರಕಾಶಕ್ಕೆ ಅನುವು ಮಾಡಿಕೊಟ್ಟಿದೆ ಎಂದು ಪ್ರತಿಪಾದಿಸಿದ್ದಾರೆ. ಥಟ್ ಅಂತ ಹೇಳಿ ಕಾರ್ಯಕ್ರಮದಲ್ಲಿ ಇದುವರೆಗೆ ೧೫

ಸಾವಿರಕ್ಕೂ ಹೆಚ್ಚು ಜನರು ಪಾಲ್ಗೊಂಡಿದ್ದು, ೨೫ ಸಾವಿರಕ್ಕೂ ಹೆಚ್ಚು ಪ್ರಶ್ನೆಗಳನ್ನು ಕೇಳಲಾಗಿದೆ ಎಂದು ತಿಳಿದು ಅಚ್ಚರಿ ಎನಿಸಿತು. ಮಾಧ್ಯಮ ತಜ್ಞ ಡಾ. ನಾ. ಸೋಮೇಶ್ವರ್ ಅಭಿನಂದನಾರ್ಹರು ಎಂದು ಅಭಿಪ್ರಾಯಪಟ್ಟಿದ್ದಾರೆ.

ಕಾರ್ಯಕ್ರಮದಲ್ಲಿ ಶಿಕ್ಷಣ ತಜ್ಞ ನಾಡೋಜ ವೂಡೇ ಪಿ.ಕೃಷ್ಣ, ಕಲ್ಬುರ್ಗಿ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಶಶಿಕಾಂತ್ ಉಡಿಕೇರಿ, ವಿದುಷಿ ರೇವತಿ ಕಾಮತ್ ಮೊದಲಾದವರು ಪಾಲ್ಗೊಂಡಿದ್ದರು.

<><><>

ರಾಜ್ಯದ ವಿವಿಧೆಡೆ ಮಳೆಯಾಗಿದೆ. ಬೆಂಗಳೂರಿನಲ್ಲೂ ರಾತ್ರಿಯೀಡಿ ಸುರಿದ ಧಾರಾಕಾರ ಮಳೆಯಿಂದ ಜನಜೀವನ ಅಸ್ತವ್ಯಸ್ಥವಾಗಿದೆ. ಇಂದು ದಕ್ಷಿಣ ಒಳನಾಡು ಸೇರಿದಂತೆ ರಾಜ್ಯದ ಹಲವೆಡೆ ಗುಡುಗು ಸಹಿತ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ದಕ್ಷಿಣ ಕನ್ನಡ, ಉಡುಪಿ, ಉತ್ತರಕನ್ನಡ ಜಿಲ್ಲೆಯ ಹಲವೆಡೆ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ. ಬೆಂಗಳೂರು, ಗದಗ, ಹಾವೇರಿ, ಕೋಲಾರ, ಚಿಕ್ಕಬಳ್ಳಾಪುರ, ರಾಮನಗರ ಜಿಲ್ಲೆಗಳಲ್ಲೂ ಇಂದು ಗುಡುಗು ಸಹಿತ ಧಾರಾಕಾರ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

<><><>

ಮಂಡ್ಯ ಜಿಲ್ಲೆಯ ಹಲವೆಡೆ ಕಳೆದ ಎರಡು ದಿನಗಳಿಂದ ಸುರಿದ ಧಾರಾಕಾರ ಮಳೆಯಿಂದ ಮನೆಗಳು, ಸಾರ್ವಜನಿಕ ಆಸ್ತಿಪಾಸ್ತಿ ಹಾಗೂ ನೂರಾರು ಎಕರೆ ಕೃಷಿ ಭೂಮಿ ಜಲಾವೃತವಾಗಿದೆ. ಈ ಹಿನ್ನೆಲೆಯಲ್ಲಿ ಇಂದು ಬೆಳಗ್ಗೆ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಅಧಿಕಾರಿಗಳು ಹಾಗೂ ಸ್ಥಳೀಯ ಜನಪ್ರತಿನಿಧಿಗಳೊಂದಿಗೆ ಪರಿಶೀಲನೆ ನಡೆಸಿದರು. ಮಂಡ್ಯ ನಗರದ ಕೆ.ಎಚ್.ಬಿ. ಕಾಲೋನಿಯಲ್ಲಿ ಮಳೆ ಅವಾಂತರಕ್ಕೆ ತಗ್ಗು ಪ್ರದೇಶಗಳಿಗೆ ನೀರು ನುಗ್ಗಿದ್ದು, ರಸ್ತೆಗಳು

ಜಲಾವೃತ್ತವಾಗಿದೆ. ಬೆಂಗಳೂರು-ಮೈಸೂರು ಎಕ್ಸ್‌ಪ್ರೆಸ್ ಹೆದ್ದಾರಿಯ ಸರ್ವೀಸ್ ರಸ್ತೆ ಜಲಾವೃತ್ತವಾಗಿರುವುದನ್ನು ಪರಿಶೀಲಿಸಿದ ಅವರು, ಬಳಿಕ ಶ್ರೀರಂಗಪಟ್ಟಣ ತಾಲ್ಲೂಕಿನ ದರಸಗುಪ್ಪೆ ಬಳಿ ಕೃಷಿ ಜಮೀನು ಜಲಾವೃತ್ತ ಸ್ಥಳಕ್ಕೂ ಭೇಟಿ ನೀಡಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಲ್ಲೆಯ ಶ್ರೀರಂಗಪಟ್ಟಣ, ಪಾಂಡವಪುರ, ಮದ್ದೂರಿನಲ್ಲಿ ಹಾನಿಗೊಳಗಾಗಿರುವ ಕೃಷಿ ಜಮೀನಿಗೆ ಶೀಘ್ರವೇ ಪರಿಹಾರ ನೀಡಲಾಗುವುದು ಎಂದು ಸ್ಪಷ್ಟಪಡಿಸಿದರು.

<><><><>

ನವದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಎರಡನೇ ಟೆಸ್ಟ್ ಕ್ರಿಕೆಟ್ ಪಂದ್ಯದ ಎರಡನೇ ದಿನವಾದ ಇಂದು ಭಾರತ ಮೊದಲ ಇನ್ನಿಂಗ್ಸ್‌ನಲ್ಲಿ ೫೧೮ ರನ್ ಗಳಿಸಿ ಡಿಕ್ಲೇರ್ ಘೋಷಿಸಿದೆ. ಭಾರತದ ಪರ ಶುಭ್‌ಮನ್ ಗಿಲ್ ಹಾಗೂ ಯಶಸ್ವಿ ಜೈಸ್ವಾಲ್ ಶತಕ ಹಾಗೂ ಸಾಯಿ ಸುದರ್ಶನ್ ೮೭ ರನ್ ಗಳಿಸಿರುವುದರಿಂದ ಭಾರತ ಬೃಹತ್ ಮೊತ್ತ ದಾಖಲಿಸಿತು. ಇತ್ತೀಚಿನ ವರದಿ ಬಂದಾಗ ವೆಸ್ಟ್ ಇಂಡೀಸ್ ೧ ವಿಕೆಟ್ ನಷ್ಟಕ್ಕೆ ೨೬ ರನ್ ಗಳಿಸಿ ಆಡುತ್ತಿದೆ.

<><><><>

ಎರಡು ಬಾರಿ ಒಲಿಂಪಿಕ್ ಕಂಚಿನ ಪದಕ ಗೆದ್ದ ಭಾರತೀಯ ಪುರುಷರ ಹಾಕಿ ತಂಡ ಇದೇ ಮೊದಲ ಬಾರಿಗೆ ಬೆಂಗಳೂರಿನ ಭಾರತೀಯ ಕ್ರೀಡಾ ಪ್ರಾಧಿಕಾರದಲ್ಲಿ ಚೆಸ್ ಮಾಸ್ಟರ್ ತರಗತಿಯಲ್ಲಿ ಭಾಗವಹಿಸಿದೆ. ಮಾಜಿ ಅಂತರಾರಾಷ್ಟ್ರೀಯ ಚೆಸ್ ಆಟಗಾರ ಮತ್ತು ಸಹ-ಮಾಲೀಕರಾದ ಪ್ರಚುರ ಪಿ ಪದಕನ್ನಯ ವಿಶಿಷ್ಟ ಚೆಸ್ ತರಗತಿ ಆಯೋಜಿಸಿದ್ದಾರೆ. ಆಟಗಾರರು ಹೆಚ್ಚು ಸ್ಪಷ್ಟವಾಗಿ ಯೋಚಿಸಲು ಮತ್ತು ತೀಕ್ಷ್ಣವಾದ ನಿರ್ಧಾರಗಳನ್ನು ತೆಗೆದುಕೊಳ್ಳಲು ಚೆಸ್ ಸಹಾಯ ಮಾಡಲಿದೆ. ಆಟಗಾರರು ತರಬೇತಿ ವೇಳೆ ನಿಜವಾದ ಆಟದ ಸನ್ನಿವೇಶಗಳಿಂದ ವೀಡಿಯೊ ಉದಾಹರಣೆಗಳನ್ನು

ಬಳಸಿಕೊಂಡು, ಸ್ಪರ್ಧಾತ್ಮಕ ಕ್ರೀಡೆಯಲ್ಲಿ ದೂರದೃಷ್ಟಿ, ಲೆಕ್ಕಾಚಾರದ ಅಪಾಯ ಮತ್ತು ಮಾನಸಿಕ ಶಿಸ್ತಿನ ಮಹತ್ವವನ್ನು ಪ್ರದರ್ಶಿಸಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>